**ಸಾಕ್ಷಿಯನ್ನು ದಿನಾಂಕಃ 29-09-2022 ರಂದು ಕರೆಯಿಸಿ ಪ್ರಮಾಣ ವಚನ ನೀಡಲಾಯಿತು.**

**ಮುಖ್ಯ ವಿಚಾರಣೆಃ ಶ್ರೀ.ಬಿ.ಹೆಚ್. ವಕೀಲರವರಿಂದಃ**

**ನನ್ನ ಮುಖ್ಯ ವಿಚಾರಣೆಯ ಬದಲಾಗಿ ಸಲ್ಲಿಸಿರುವ ಪ್ರಮಾಣಪತ್ರದಲ್ಲಿನ ವಿಷಯಗಳೆಲ್ಲವು ಸತ್ಯವಾಗಿರುತ್ತದೆ. ಅವುಗಳನ್ನು ನಾನೇ ಹೇಳಿ ಬರೆಯಿಸಿರುತ್ತೇನೆ. ಅದರಲ್ಲಿ ಇರುವ ಸಹಿ ನನ್ನದೇ ಇರುತ್ತದೆ. ಸದರಿ ಸಾಕ್ಷಿಯನ್ನು ಪಿ ಡಬ್ಲೂ 1 ಎಂದು ಪರಿಗಣಿಸಲಾಗಿದೆ.**

ನಾನು ಈ ಪ್ರಕರಣಕ್ಕೆ ಸಂಬಂದಪಟ್ಟಂತೆ ರಿ-ಸೆಟ್ಲಿಮೆಂಟ್ ರಿಜಿಸ್ಟರ್ನ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಸರ್ವೆ ನಂ.529ಬಿ ನೇದ್ದಕ್ಕೆ ಸಂಬಂದಿಸಿದ ಮೂರು ಕೈಬರಹ ಪಹಣಿಗಳ ದೃಢೀಕೃತ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-2 ರಿಂದ 4 ಎಂದು, ಸರ್ವೆ ನಂ.529/ಬಿ ನೇದ್ದಕ್ಕೆ ಸಂಬಂದಿಸಿದ ಪಹಣಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು, ಎಂ.ಆರ್.ನಂ.35/2003-04 ನೇದ್ದನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು, ಕ್ರಯಕರಾರು ಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿತ್ತೇನೆ. ಸದರಿ ದಾಖಲೆಯ 10 ನೇ ಪ್ರತಿವಾದಿಯಹತ್ತಿರ ಇರುತ್ತದೆ ಎಂದು ಹೇಳಿದ್ದರಿಂದ ಅದನ್ನು ನಿಪಿ-7 ಎಂದು, ಎಂ.ಇ.ನಂ.69/1998-99 ನೇದ್ದರ ದೃಢೀಕೃತ ಹಾಜರುಪಡಿಸಿದ್ದು ಅದನ್ನು ನಿಪಿ-8 ಎಂದು, ಎರಡು ಕರಾಕರಣಿಯಾದಿಯನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-9 ಮತ್ತು 10 ಎಂದು, ಎರಡು ಕರವಸೂಲಿ ರಶೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಅನುಕ್ರಮವಾಗಿ ನಿಪಿ-11 ಮತ್ತು 12 ಎಂದು ಗುರುತಿಸಲಾಯಿತು. ಆದ್ದರಿಂದ ದಾವೆಯನ್ನು ಡಿಕ್ರಿ ಮಾಡಬೇಕಾಗಿ ಕೋರಿಕೊಳ್ಳುತ್ತೇನೆ.

**ಪಾಟೀಸವಾಲುಃ** ಶ್ರೀ.ವಿ.ಜಿ.ಪಿ. ವಕೀಲರು ಪಾಟೀಸವಾಲಿಗೆ ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಲಾಯಿತು.

( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸರಿಯಿದೆ.**

**ಸಿವಿಲ್ ನ್ಯಾಯಾಧೀಶರು ಮತ್ತು**

**ಜೆ.ಎಂ.ಎಫ್.ಸಿ. ಹರಪನಹಳ್ಳಿ.**